**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 57 ಗ್ರಾಪಂಸಿ 2019 (ಭಾಗ-2)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:08-06-2020.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳು.

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತಿ ನೌಕರರಿಗೆ ವೇತನ ಪಾವತಿಸಿರುವ ವಿವರ ನೀಡುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಗ್ರಾಮ ಪಂಚಾಯತಿ ನೌಕರರುಗಳಿಗೆ ಕಳೆದ 8 ತಿಂಗಳುಗಳಿಂದ ವೇತನ ಪಾವತಿಸದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಪಂಚತಂತ್ರ ತಂತ್ರಾಂಶದಲ್ಲಿ ಸೇವಾ ವಿವರವನ್ನು ಅಳವಡಿಸಿ ಪರಿಶೀಲನೆ ಮಾಡಿರುವ ನೌಕರರಿಗೆ ಸರ್ಕಾರದ ನಿಧಿಯಿಂದ ವೇತನ ಪಾವತಿಸಲು ಒಳಪಡಿಸಲಾಗಿದೆ.

ಸರ್ಕಾರದಿಂದ ಗ್ರಾಮ ಪಂಚಾಯತಿ ಸಿಬ್ಬಂದಿಗಳ ವೇತನಕ್ಕಾಗಿ ವಾರ್ಷಿಕವಾಗಿ ರೂ. 520.00 ಕೋಟಿಗಳ ಅನುದಾನ ನಿಗಧಿಪಡಿಸಿದ್ದು, 4 ತ್ರೈಮಾಸಿಕ ಕಂತುಗಳಲ್ಲಿ ಅನುದಾನ ಬಿಡುಗಡೆಗೊಳಿಸಲಾಗುತ್ತದೆ.

ಪಂಚತಂತ್ರ ತಂತ್ರಾಂಶದಲ್ಲಿ ಸರ್ಕಾರದ ನಿಧಿಯಿಂದ ವೇತನ ಪಾವತಿಸಲು ದಾಖಲಾಗದಿರುವ ಮತ್ತು ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದ ಮಾದರಿಯಲ್ಲಿ ಮಂಜೂರಾಗದಿರುವ ಹುದ್ದೆಗಳಿಗೆ ಗ್ರಾಮ ಪಂಚಾಯತಿಗಳು ನೇಮಕ ಮಾಡಿಕೊಂಡು ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಗ್ರಾಮ ಪಂಚಾಯತಿಗಳು ಸ್ವಂತ ಸಂಪನ್ಮೂಲದಲ್ಲಿ ವೇತನ ಪಾವತಿಸಬೇಕಾಗಿರುತ್ತದೆ.

ಆದುದರಿಂದ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ಮಾರ್ಚ್ 2020 ರ ಅಂತ್ಯದವರೆಗೆ ವೇತನ ಪಾವತಿಸಿರುವ ಗ್ರಾಮ ಪಂಚಾಯತಿವಾರು ವಿವರವನ್ನು ಜಿಲ್ಲಾವಾರು ಕ್ರೋಢೀಕರಣ ಮಾಡಿ ಕೂಡಲೇ ಸರ್ಕಾರಕ್ಕೆ ಸಲ್ಲಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

B. Naveenkumar 8/6/2020
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ, (ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.**

1) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
2) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.